ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ

ಸಿದ್ದಾಪುರ

ಸಿ.ಸಿ. 4/2024

| | |
|---|---|
| ಸಿ.ಡಬ್ಲ್ಯೂಃ | 8 |
| ಪಿ.ಡಬ್ಲ್ಯೂಃ | 6 |

| | | |
|---|---|---|
| **ಸಾಕ್ಷಿದಾರರ ಹೆಸರು** | ಃ | ಬಾಲಚಂದ್ರ |
| ತಂದೆ ಹೆಸರು | ಃ | ರಾಮಚಂದ್ರ ಗೌಡ |
| ವಯಸ್ಸು | ಃ | 26 ವರ್ಷ |
| ವೃತ್ತಿ | ಃ | ಕಾರ್ಪೆಂಟರ ಕೆಲಸ |
| ವಾಸ | ಃ | ಹೆಗ್ಗರಣೆ |

**ಸಾಕ್ಷಿಗೆ ಪ್ರಮಾಣ ವಚನ ಮಾಡಿಸಿದ ದಿನಾಂಕಃ 02-07-2026**

**ಮುಖ್ಯ ವಿಚಾರಣೆಃ ಮಾನ್ಯ ಎ ಪಿ ಪಿ ರವರಿಂದ**

ನನಗೆ ಆರೋಪಿಯ ಪರಿಚಯ ಇರುತ್ತದೆ. ನನಗೆ ಚಾಸಾ-1 ರವರ ಪರಿಚಯ ಇರುವುದಿಲ್ಲ. ನನಗೆ ಮೃತ ಸುಬ್ರಾಯ ರವರ ಪರಿಚಯ ಇರುವುದಿಲ್ಲ. ನಾನು ಯಾವುದೇ ಅಪಘಾತವನ್ನು ನೋಡಿರುವುದಿಲ್ಲ. ಪೋಲೀಸರು ನನಗೆ ಪೋನ್ ಮಾಡಿ ಹೆರೂರು ಬಳಿ ಬರಲು ಹೇಳಿದ್ದು, ಆಗ ನಾನು ಬೆಳಿಗ್ಗೆ 11-30 ಗಂಟೆಗೆ ಹೆರೂರು ಬಳಿ ಹೋಗಿದ್ದು ಅಲ್ಲಿ ಪೋಲೀಸರು ಪೋಟೋವನ್ನು ತೆಗೆದಿದ್ದು ಹಾಗೂ ನನ್ನ ಸಹಿ ಪಡೆದುಕೊಂಡಿರುತ್ತಾರೆ. ಯಾವ ಕಾರಣಕ್ಕಾಗಿ ಎಂದು ನನಗೆ ಗೊತ್ತಿರುವುದಿಲ್ಲ . ಪೋಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿರುವುದಿಲ್ಲ ಹಾಗೂ ಯಾವುದೇ ವಸ್ತುಗಳನ್ನು ವಶಪಡಿಸಿಕೊಂಡಿರುವುದಿಲ್ಲ.

ಪೋಲೀಸರು ಸಹಿ ಮಾಡಲು ಹೇಳಿದ ಕಾರಣ ನಾನು ಸಹಿ ಮಾಡಿರುತ್ತೇನೆ. ಪೋಲೀಸರಿಗೆ ನಾನು ಯಾವುದೇ ಸ್ಥಳ ತೋರಿಸಿರುವುದಿಲ್ಲ.

ಸಾಕ್ಷಿಗೆ ಈಗ ಪಂಚನಾಮೆಯನ್ನು ತೋರಿಸಿದ್ದು ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ.1 ಎಂದು, ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-1(ಸಿ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಈಗ ಆರು ಪೊಟೊವನ್ನು ತೋರಿಸಿದ್ದು ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ.3 ರಿಂದ 8 ಎಂದು ಗುರುತಿಸಲಾಗಿರುತ್ತದೆ .

(ಈ ಹಂತದಲ್ಲಿ ಮಾನ್ಯ ಸ.ಸ.ಅ. ಅವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡುವಂತೆ ಕೋರಿಕೊಂಡಿದ್ದು, ಆಲಿಸಿ ಅನುಮತಿ ನೀಡಲಾಯಿತು)

**ಪಾಟಿ ಸವಾಲುಃ ಮಾನ್ಯ ಸ.ಸ.ಅ ರವರಿಂದ**

ದಿಃ 08-11-2023 ರಂದು ಬೆಳಿಗ್ಗೆ 7-45 ಗಂಟೆ ಸಮಯದಲ್ಲಿ ಆರೋಪಿಯು ಬೊಲೆರೊ ಪಿಕ್ ಅಪ್ ವಾಹನವನ್ನು ಅತೀವೇಗ ಹಾಗೂ ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಬಜಾಜ್ ಸಿಟಿ 100 ವಾಹನಕ್ಕೆ ಡಿಕ್ಕಿ ಹೊಡೆದ ಪರಿಣಾಮ ಚಾಸಾ-1 ರವರಿಗೆ ಸಣ್ಣಪುಟ್ಟ ಗಾಯಗಳಾಗಿದ್ದು, ಹಾಗೂ ಸುಬ್ರಾಯ ಹೆಗಡೆ ರವರು ತೀರಿಕೊಂಡಿದ್ದು, ನಂತರ ಆರೋಪಿ ವಾಹನವನ್ನು ನಿಲ್ಲಿಸದೇ ಚಲಾಯಿಸಿಕೊಂಡು ಹೋಗಿದ್ದು, ಈ ಘಟನೆಯನ್ನು ನಾನು ನೋಡಿದ್ದು ಹಾಗೂ ನಾನು ಸದರಿ ಬೊಲೆರೊ ಪಿಕ್ ಅಪ್ ವಾಹನದಲ್ಲಿ ಇದ್ದೆನು ಎಂದರೆ ಸಾಕ್ಷಿಯು ಇಲ್ಲ ಎಂದು ನುಡಿಯುತ್ತಾರೆ.

ನಂತರ ದಿಃ 10-11-2023 ರಂದು ಪೋಲೀಸರು ನನ್ನನ್ನು ಹಾಗೂ ಚಾಸಾ-2 ಮತ್ತು 3 ರವರನ್ನು ಅಪಘಾತದ ಸಂಬಂಧ ಪಂಚನಾಮೆ ಮಾಡುವ ಸಲುವಾಗಿ ಕರೆದಿರುತ್ತಾರೆ ಎಂದರೆ ಸರಿಯಲ್ಲ. ನಂತರ ನಾನು ಪೋಲೀಸರಿಗೆ ಅಪಘಾತ ಸ್ಥಳವನ್ನು ತೋರಿಸಿರುತ್ತೇನೆ ಎಂದರೆ ಸರಿಯಲ್ಲ. ನಂತರ ನಾವು ಸದರಿ ಪಂಚನಾಮೆಗೆ ಸಹಿ ಮಾಡಿರುತ್ತೇವೆ ಎಂದರೆ ಸರಿಯಲ್ಲ. ಪೋಲೀಸರು ಘಟನಾ ಸ್ಥಳದಲ್ಲಿ ಒಂದು ದ್ವಿಚಕ್ರ ವಾಹನವನ್ನು ನನ್ನ ಸಮಕ್ಷಮ ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಪಂಚನಾಮೆ ಕಾಲದಲ್ಲಿ ಪೋಲೀಸರು ಪೊಟೊ ವನ್ನು ತೆಗೆದಿರುತ್ತಾರೆ ಎಂದರೆ ಯಾವ ಕಾರಣಕ್ಕಾಗಿ ತೆಗೆದುಕೊಂಡಿರುತ್ತಾರೆ ಗೊತ್ತಿಲ್ಲ ಎಂದು ನುಡಿಯುತ್ತಾರೆ .

ಈ ಘಟನೆ ಸಂಬಂದ ನಾನು ಪೋಲೀಸರ ಮುಂದೆ ಹೇಳಿಕೆ ಹಾಗೂ ಮರು ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ.

ಸಾಕ್ಷಿಗೆ ಈಗ ಹೇಳಿಕೆ ಹಾಗೂ ಮರು ಹೇಳಿಕೆ ತೋರಿಸಿದ್ದು ಸಾಕ್ಷಿ ಅದನ್ನು ನೋಡಿ ಹೇಳಿಕೆ ನೀಡಿಲ್ಲ ಎಂದು ಹೇಳಿದ್ದರಿಂದ ಅಭಿಯೋಜನೆ ಪರವಾಗಿ ಅವುಗಳನ್ನು ಕ್ರಮವಾಗಿ ನಿಪಿ -19 ಮತ್ತು

ನಿ.ಪಿ-20 ಎಂದು ಅವುಗಳಲ್ಲಿರುವ ಆಯ್ದು ಭಾಗವನ್ನು ಕ್ರಮವಾಗಿ ನಿ.ಪಿ-19(ಎ) ಮತ್ತು ನಿ.ಪಿ-20(ಎ) ಎಂದು ಗುರುತಿಸಲಾಯಿತು.

ನನಗೆ ಈ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ಇದ್ದರು ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ

ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ

ಆರೋಪಿ ಪರ ವಕೀಲರು ಪಾಟೀಸವಾಲು ಇಲ್ಲಎಂದು ತಿಳಿಸಿದ್ದರಿಂದ ಪಾಟೀಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರು ವಿಚಾರಣೆ ಇಲ್ಲ.

( ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಸಾ.ಓ.ಹೇ.ಸ.ಒ

ಸಹಿ ಇದೆ.

ಸಿವಿಲ್ ಜಡ್ಜ್ ಮತ್ತು ಜೆಎಂಎಫ್.ಸಿ

ಸಿದ್ದಾಪುರ

ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ  ನ್ಯಾಯಾಲಯ

ಸಿದ್ದಾಪುರ

ಸಿ.ಸಿ.  4/2024

| | |
|---|---|
| ಸಿ.ಡಬ್ಲ್ಯೂ: | 5 |
| ಪಿ.ಡಬ್ಲ್ಯೂ: | 5 |

| | | |
|---|---|---|
| **ಸಾಕ್ಷಿದಾರರ ಹೆಸರು** | : | ಸಮೀರ್ |
| ತಂದೆ ಹೆಸರು | : | ಅಬ್ದುಲ್ ವಾಕೈದ್ |
| ವಯಸ್ಸು | : | 29 ವರ್ಷ |
| ವೃತ್ತಿ | : | ಖಾಸಗಿ ಕೆಲಸ |
| ವಾಸ | : | ಹೆಗ್ಗರಣೆ |

**ಸಾಕ್ಷಿಗೆ ಪ್ರಮಾಣ ವಚನ ಮಾಡಿಸಿದ ದಿನಾಂಕ:** 02-07-2026

**ಮುಖ್ಯ ವಿಚಾರಣೆ: ಮಾನ್ಯ ಎ ಪಿ ಪಿ ರವರಿಂದ**

ನನಗೆ ಚಾಸಾ-4 ಮತ್ತು ಆರೋಪಿಯ ಪರಿಚಯ ಇರುತ್ತದೆ. ನಾನು ಕ್ರಿಕೇಟ್ ಟೂರ್ನಮೆಂಟ್ ನಡೆಸಲು ಅನುಮತಿ ಪಡೆಯಲು ಪೋಲೀಸ ಠಾಣೆಗೆ ಹೋಗಿದ್ದು ಆಗ ಪೋಲೀಸರು ಒಂದು ದಾಖಲೆಗೆ ನನ್ನ ಸಹಿ

ಪಡೆದಿರುತ್ತಾರೆ. ಅದರಲ್ಲಿ ಏನು ಬರೆದಿರುತ್ತದೆ ಎಂದು ನನಗೆ ಗೊತ್ತಿಲ್ಲ. ಪೋಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿರುವುದಿಲ್ಲ ಹಾಗೂ ಯಾವುದೇ ವಸ್ತುಗಳನ್ನು ವಶಪಡಿಸಿಕೊಂಡಿರುವುದಿಲ್ಲ.

ಪೋಲೀಸರು ಸಹಿ ಮಾಡಲು ಹೇಳಿದ ಕಾರಣ ನಾನು ಸಹಿ ಮಾಡಿರುತ್ತೇನೆ.

ಸಾಕ್ಷಿಗೆ ಈಗ ಪಂಚನಾಮೆಯನ್ನು ತೋರಿಸಿದ್ದು ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ.17 ಎಂದು, ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-17(ಬಿ) ಎಂದು ಗುರುತಿಸಲಾಯಿತು.



ಸಾಕ್ಷಿಗೆ ಈಗ ಒಂದು ಪೊಟೊವನ್ನು ತೋರಿಸಿದ್ದು ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ.18 ಎಂದು ಗುರುತಿಸಲಾಗಿರುತ್ತದೆ .

(ಈ ಹಂತದಲ್ಲಿ ಮಾನ್ಯ ಸ.ಸ.ಅ. ಅವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡುವಂತೆ ಕೋರಿಕೊಂಡಿದ್ದು, ಆಲಿಸಿ ಅನುಮತಿ ನೀಡಲಾಯಿತು)

**ಪಾಟಿ ಸವಾಲುಃ ಮಾನ್ಯ ಸ.ಸ.ಅ ರವರಿಂದ**

ಆರೋಪಿ ನನಗೆ 4-5 ವರ್ಷಗಳಿಂದ ಪರಿಚಯ ಇರುತ್ತಾರೆ. ದಿಃ 10-11-2023 ರಂದು ಪೋಲೀಸರು ನನ್ನನ್ನು ಹಾಗೂ ಚಾಸಾ-4 ರವರನ್ನು ಅಪಘಾತದ ಸಂಬಂಧ ವಾಹನ ಪಂಚನಾಮೆ ಮಾಡುವ ಸಲುವಾಗಿ ಕರೆದಿರುತ್ತಾರೆ ಎಂದರೆ ಸರಿಯಲ್ಲ. ಅದಕ್ಕೆ ನಾನು ಮತ್ತು ಚಾಸಾ-4 ರವರು ಒಪ್ಪಿಕೊಂಡೆವು ಎಂದರೆ ಸರಿಯಲ್ಲ. ನಂತರ ನಾನು ಮತ್ತು ಚಾಸಾ-4 ರವರು ಪೋಲೀಸ ಠಾಣೆಗೆ ಹೋಗಿದ್ದು, ಅಲ್ಲಿ ಪೋಲೀಸರು ನಮ್ಮ ಸಮಕ್ಷಮ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಂತರ ನಾವು ಸದರಿ ಪಂಚನಾಮೆಗೆ ಸಹಿ ಮಾಡಿರುತ್ತೇವೆ ಎಂದರೆ ಸರಿಯಲ್ಲ. ಪೋಲೀಸರು ಘಟನಾ ಸ್ಥಳದಲ್ಲಿ ಒಂದು ಬೊಲೆರೊ ಪಿಕ್ ಅಪ್ ವಾಹನವನ್ನು ನನ್ನ ಸಮಕ್ಷಮ ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಪಂಚನಾಮೆ ಕಾಲದಲ್ಲಿ ಪೋಲೀಸರು ಪೊಟೊ ವನ್ನು ತೆಗೆದಿರುತ್ತಾರೆ ಎಂದರೆ ಯಾವ ಕಾರಣಕ್ಕಾಗಿ ತೆಗೆದುಕೊಂಡಿರುತ್ತಾರೆ ಗೊತ್ತಿಲ್ಲ ಎಂದು ನುಡಿಯುತ್ತಾರೆ .

ನನಗೆ ಈ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ಇದ್ದರು ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ

ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ

ಆರೋಪಿ ಪರ ವಕೀಲರು ಪಾಟೀಸವಾಲು ಇಲ್ಲಎಂದು ತಿಳಿಸಿದ್ದರಿಂದ ಪಾಟೀಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರು ವಿಚಾರಣೆ ಇಲ್ಲ.

( ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಸಾ.ಓ.ಹೇ.ಸ.ಒ

ಸಹಿ ಇದೆ.

ಸಿವಿಲ್ ಜಡ್ಜ್ ಮತ್ತು ಜೆಎಂಎಫ್.ಸಿ

ಸಿದ್ದಾಪುರ

ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ

ಸಿದ್ದಾಪುರ

ಸಿ.ಸಿ. 4/2024

| | |
|---|---|
| ಸಿ.ಡಬ್ಲ್ಯೂ: | 4 |
| ಪಿ.ಡಬ್ಲ್ಯೂ: | 4 |

| | | |
|---|---|---|
| **ಸಾಕ್ಷಿದಾರರ ಹೆಸರು** | : | ಮಹಮ್ಮದ್ ಅಖಿಲ್ |
| ತಂದೆ ಹೆಸರು | : | ಮಹಮ್ಮದ್ ರಪೀಕ್ ಸಾಬ |
| ವಯಸ್ಸು | : | 25 ವರ್ಷ |
| ವೃತ್ತಿ | : | ಟೈಲ್ಸ ಕೆಲಸ |
| ವಾಸ | : | ಶಿರಸಿ |

**ಸಾಕ್ಷಿಗೆ ಪ್ರಮಾಣ ವಚನ ಮಾಡಿಸಿದ ದಿನಾಂಕ: 02-07-2026**

**ಮುಖ್ಯ ವಿಚಾರಣೆ: ಮಾನ್ಯ ಎ ಪಿ ಪಿ ರವರಿಂದ**

ನನಗೆ ಚಾಸಾ-5 ಮತ್ತು ಆರೋಪಿಯ ಪರಿಚಯ ಇರುತ್ತದೆ. ನಾನು ಕ್ರಿಕೇಟ್ ಟೂರ್ನಮೆಂಟ್ ನಡೆಸಲು ಅನುಮತಿ ಪಡೆಯಲು ಪೋಲೀಸ ಠಾಣೆಗೆ ಹೋಗಿದ್ದು ಆಗ ಪೋಲೀಸರು ಒಂದು ದಾಖಲೆಗೆ ನನ್ನ ಸಹಿ ಪಡೆದಿರುತ್ತಾರೆ. ಅದರಲ್ಲಿ ಏನು ಬರೆದಿರುತ್ತದೆ ಎಂದು ನನಗೆ ಗೊತ್ತಿಲ್ಲ. ಪೋಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿರುವುದಿಲ್ಲ ಹಾಗೂ ಯಾವುದೇ ವಸ್ತುಗಳನ್ನು ವಶಪಡಿಸಿಕೊಂಡಿರುವುದಿಲ್ಲ.

ಪೋಲೀಸರು ಸಹಿ ಮಾಡಲು ಹೇಳಿದ ಕಾರಣ ನಾನು ಸಹಿ ಮಾಡಿರುತ್ತೇನೆ.

ಸಾಕ್ಷಿಗೆ ಈಗ ಪಂಚನಾಮೆಯನ್ನು ತೋರಿಸಿದ್ದು ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ.17 ಎಂದು, ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-17(ಎ) ಎಂದು ಗುರುತಿಸಲಾಯಿತು.



ಸಾಕ್ಷಿಗೆ ಈಗ ಒಂದು ಪೊಟೊವನ್ನು ತೋರಿಸಿದ್ದು ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ.18 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಮಾನ್ಯ ಸ.ಸ.ಅ. ಅವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡುವಂತೆ ಕೋರಿಕೊಂಡಿದ್ದು, ಆಲಿಸಿ ಅನುಮತಿ ನೀಡಲಾಯಿತು)

**ಪಾಟಿ ಸವಾಲುಃ ಮಾನ್ಯ ಸ.ಸ.ಅ ರವರಿಂದ**

ಆರೋಪಿ ನನಗೆ 10-15 ವರ್ಷಗಳಿಂದ ಪರಿಚಯ ಇರುತ್ತಾರೆ . ದಿಃ 10-11-2023 ರಂದು ಪೋಲೀಸರು ನನ್ನನ್ನು ಹಾಗೂ ಚಾಸಾ-5 ರವರನ್ನು ಅಪಘಾತದ ಸಂಬಂಧ ವಾಹನ ಪಂಚನಾಮೆ ಮಾಡುವ ಸಲುವಾಗಿ ಕರೆದಿರುತ್ತಾರೆ ಎಂದರೆ ಸರಿಯಲ್ಲ. ಅದಕ್ಕೆ ನಾನು ಮತ್ತು ಚಾಸಾ-5 ರವರು ಒಪ್ಪಿಕೊಂಡೆವು ಎಂದರೆ ಸರಿಯಲ್ಲ. ನಂತರ ನಾನು ಮತ್ತು ಚಾಸಾ-5 ರವರು ಪೋಲೀಸ ಠಾಣೆಗೆ ಹೋಗಿದ್ದು, ಅಲ್ಲಿ ಪೋಲೀಸರು ನಮ್ಮ ಸಮಕ್ಷಮ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಂತರ ನಾವು ಸದರಿ ಪಂಚನಾಮೆಗೆ ಸಹಿ ಮಾಡಿರುತ್ತೇವೆ ಎಂದರೆ ಸರಿಯಲ್ಲ. ಪೋಲೀಸರು ಘಟನಾ ಸ್ಥಳದಲ್ಲಿ ಒಂದು ಬೊಲೆರೊ ಪಿಕ್ ಅಪ್ ವಾಹನವನ್ನು ನನ್ನ ಸಮಕ್ಷಮ ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಪಂಚನಾಮೆ ಕಾಲದಲ್ಲಿ ಪೊೀಲೀಸರು ಪೊಟೊ ವನ್ನು ತೆಗೆದಿರುತ್ತಾರೆ ಎಂದರೆ ಯಾವ ಕಾರಣಕ್ಕಾಗಿ ತೆಗೆದುಕೊಂಡಿರುತ್ತಾರೆ ಗೊತ್ತಿಲ್ಲ ಎಂದು ನುಡಿಯುತ್ತಾರೆ .

ನನಗೆ ಈ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ಇದ್ದರು ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ

ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ

ಆರೋಪಿ ಪರ ವಕೀಲರು ಪಾಟೀಸವಾಲು ಇಲ್ಲಎಂದು ತಿಳಿಸಿದ್ದರಿಂದ ಪಾಟೀಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರು ವಿಚಾರಣೆ ಇಲ್ಲ.

( ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಸಾ.ಓ.ಹೇ.ಸ.ಒ

ಸಹಿ ಇದೆ.
ಸಿವಿಲ್ ಜಡ್ಜ್ ಮತ್ತು ಜೆಎಂಎಫ್.ಸಿ
ಸಿದ್ದಾಪುರ